**<u>ಗೌರವಾನ್ವಿತ ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಲಯ, ಅರಕಲಗೂಡು.</u>**

**<u>ದಿನಾಂಕ:</u> 03.06.2026** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ **<u>ಪಾಟೀ ಸವಾಲು:</u>** ಪ್ರತಿವಾದಿ ಪರ ವಕೀಲರು **ಶ್ರೀ. ವೈ ಎನ್ ಪಿ** ರವರಿಂದ.

1 ರಿಂದ 3ನೇ ಪ್ರತಿವಾದಿಯರು ಕಳ್ಳಿಮುದ್ದನಹಳ್ಳಿ ಗ್ರಾಮದಲ್ಲಿರುವ ಜಮೀನಿನಲ್ಲಿ ಉಳುಮೆ ಮಾಡುತ್ತಿರುವಾಗ ನಾನು ಹೋಗಿ ಅಡ್ಡಪಡಿಸಿದ್ದರಿಂದ ಒಂದು ಕ್ರಿಮಿನಲ್ ಮೊಕದ್ದಮೆ ಆಗಿದ್ದು ಅದು ಹಾಸನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು 1 ರಿಂದ 3ನೇ ಪ್ರತಿವಾದಿಯವರೇ ನಮಗೆ ತೊಂದರೆ ಕೊಟ್ಟಿರುತ್ತಾರೆ. ಈ ವಿಚಾರವಾಗಿ ನಾನು ಪೋಲೀಸರಿಗೆ ದೂರು ನೀಡಿರುತ್ತೇನೆ. ನಾನು ದಾವಾ ಸ್ವತ್ತಿನಲ್ಲಿ ಯಾವಾಗಲೂ ಸ್ವಾದೀನದಲ್ಲಿರಲಿಲ್ಲ ಎಂದರೆ ಸರಿಯಲ್ಲ ಮತ್ತು ಸುಳ್ಳು ಖಾತೆ ಮಾಡಿಸಿಕೊಂಡು ನಾನು 1 ರಿಂದ 3ನೇ ಪ್ರತಿವಾದಿಯರ ಸ್ವಾದೀನಕ್ಕೆ ತೊಂದರೆ ಕೊಡುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆಯ ಒಡ್ಡ ಹುಟ್ಟಿದ ಹೆಣ್ಣು ಮಕ್ಕಳು ಹಿಸ್ಸೆ ಕೋರಿ ಅದಾ ನಂ. 175/10 ರಲ್ಲಿ ದಾವಾ ದಾಖಲು ಮಾಡಿದ್ದರು ಎಂದರೆ ಸರಿ. ಸಾಕ್ಷಿ ಮುಂದುವರೆದು ಸದರಿ ಹೆಣ್ಣು ಮಕ್ಕಳು ಮದುವೆಯಾಗಿ ಬೇರೆ ವಾಸವಾಗಿದ್ದರು ಎಂದು ನುಡಿಯುತ್ತಾರೆ. ಆ ದಾವೆಯಲ್ಲಿ ನಾವೆಲ್ಲರೂ ರಾಜಿ ಮಾಡಿಕೊಳ್ಳುತ್ತೇವೆ ಎಂದು ಹೇಳಿ ಆ ದಾವೆ ಹಿಂತೆಗೆದುಕೊಳ್ಳಲಾಗಿದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಆ ದಾವೆ ನಮ್ಮ ಪರ ಆಗಿರುತ್ತದೆ. ಸದರಿ ಆದೇಶ ದಾಖಲಾತಿಯನ್ನು ಈ ನ್ಯಾಯಾಲಯದಲ್ಲಿ ಹಾಜರುಪಡಿಸಿರುತ್ತೇನೆ. ಸದರಿ ಆದೇಶವನ್ನು ನಾವು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಆದೇಶ ನಮ್ಮ ಪರವಾಗಿ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಆ ದಾವೆಯಲ್ಲಿ ಹೇಳಿದ ಹಾಗೆ ರಾಜಿ ಮಾಡಿಕೊಳ್ಳದೇ ಇದ್ದ ಕಾರಣ ಹೆಣ್ಣು ಮಕ್ಕಳು ಈಗ ಮತ್ತೊಂದು ದಾವೆಯನ್ನು ಹಾಕಿರುತ್ತಾರೆ ಎಂದರೆ ಸರಿ.

ನಮಗೆ ದಾವಾ ಸ್ವತ್ತು ಹಿಸ್ಸೆ ಆಗಿ ಬರದೇ ಇದ್ದರು 1ನೇ ಪ್ರತಿವಾದಿ ಮೂಗನಾಗಿದ್ದು , 2 ರಿಂದ 4ನೇ ಪ್ರತಿವಾದಿಯರು ಮಹಿಳೆಯರಾಗಿ ತಿಳುವಳಿಕೆ ಜ್ಞಾನ ಅಷ್ಟಾಗಿ ಇರದೇ ಇರುವುದನ್ನು ದುರುಪಯೋಗಪಡಿಸಿಕೊಂಡು ನಮ್ಮ ಹೆಸರಿಗೆ ಖಾತೆ

ವರ್ಗಾಣೆ ಮಾಡಿಸಿಕೊಂಡು ಈಗ ಸುಳ್ಳು ದಾವಾ ಹಾಕಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಸ್ವಾದೀನದಲ್ಲಿ ನಾನಾಗಲೀ ನನ್ನ ತಂದೆಯಾಗಲೀ ಇಲ್ಲಿಯವರೆಗೆ ಸ್ವಾದೀನದಲ್ಲಿ ಇರುವುದಿಲ್ಲ ಮತ್ತು ಪ್ರತಿವಾದಿಯರೇ ದಾವಾ ಸ್ವತ್ತಿನ ಸ್ವಾದೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. ಆದ್ದರಿಂದ ನಾನು ಕೋರಿರುವ ಪ್ರಾರ್ಥನೆಗೆ ಅಹರ್ನಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಸ್ವಾದೀನದಲ್ಲಿ ನಾನು ಇರದಿದ್ದರೂ , ದಾವಾ ಸ್ವತ್ತನ್ನು ಪಡೆಯಬೇಕೆಂಬ ದುರುದ್ದೇಶದಿಂದ ಸುಳ್ಳು ದಾಖಲಾತಿ ಹಾಜರುಪಡಿಸಿ ಸುಳ್ಳು ದಾವಾ ಹಾಕಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ಸಾಕ್ಷಿಯ ಹೇಳಿಕೆ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ. ಸರಿಯಿದೆ.

**ಪ್ರ.ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಧೀಶರು,**
**ಅರಕಲಗೂಡು.**